# All India Radio: Bangalore
# National Bulletin In Kannada
# 06.01.2026  1.10 pm

## ಆಕಾಶವಾಣಿ, ಬೆಂಗಳೂರು

## ರಾಷ್ಟ್ರೀಯ ವಾರ್ತೆಗಳು

## 06.01.2026  1.10 pm

**<>><><*><><<>**

**ಮುಖ್ಯಾಂಶಗಳು**

**೧. ಭಾರತ-ಫ್ರಾನ್ಸ್ ನಡುವೆ ಮಹತ್ವದ ಸಹಭಾಗಿತ್ವ ; ಮುಂದಿನ ಹಂತಕ್ಕೆ ಕೊಂಡೊಯ್ಯಲು ವ್ಯಾಪಕ ಕ್ರಮ - ವಿದೇಶಾಂಗ ಸಚಿವ ಡಾ.ಎಸ್. ಜೈಶಂಕರ್**

**೨. ಸಿಬಿಎಸ್‌ಸಿ ಪರೀಕ್ಷಾರ್ಥಿಗಳಿಗೆ ಭಯ, ಒತ್ತಡ ನಿವಾರಿಸಲು ಕೇಂದ್ರೀಯ ಪ್ರೌಢ ಶಿಕ್ಷಣ ಮಂಡಳಿಯಿಂದ ಆಪ್ತ ಸಮಾಲೋಚನೆ**

**೩. ಯಶಸ್ವಿಯಾಗಿ ನಡೆದ ಪ್ರಧಾನಿ ಆಶಯದ ಸಕ್ರಿಯ ಆಡಳಿತ, ಸಕಾಲಿಕ ಅನುಷ್ಠಾನದ ಪ್ರಗತಿ ವೇದಿಕೆ ೫೦ನೇ ಸಭೆ**

**೪. ತಮಿಳುನಾಡಿನ ತಿರುಪ್ಪರಂಕುಂದ್ರಂ ಬೆಟ್ಟದ ಮೇಲೆ ದೀಪ ಬೆಳಗಿಸಲು ಅನುಮತಿಸಿದ್ದ ಏಕಸದಸ್ಯ ಪೀಠದ ಆದೇಶ ಎತ್ತಿಹಿಡಿದ ಮದ್ರಾಸ್ ಹೈಕೋರ್ಟ್**

**<>><><*><><<>**

ವಿದೇಶಾಂಗ ಸಚಿವ ಡಾ.ಎಸ್. ಜೈಶಂಕರ್ ಅವರಿಂದು ಪ್ಯಾರಿಸ್‌ನಲ್ಲಿ ಫ್ರಾನ್ಸ್ ಹಾಗೂ ಭಾರತೀಯ ಯುವ ಸಮೂಹದಿಂದ ಆಯೋಜಿಸಲಾದ ವಾಣಿಜ್ಯ ಮತ್ತು ಕೈಗಾರಿಕಾ ಸಂಘದ ಸಭೆಯಲ್ಲಿ ಪಾಲ್ಗೊಂಡರು. ಈ ಕುರಿತು ಸಾಮಾಜಿಕ ಮಾಧ್ಯಮದಲ್ಲಿ ಪೋಸ್ಟ್ ಮಾಡಿರುವ ಅವರು, ಜಾಗತಿಕವಾಗಿ ಸಾಕಷ್ಟು ಪರಿವರ್ತನೆಯಾಗುತ್ತಿದ್ದು, ಇದೀಗ ಭಾರತ-ಫ್ರಾನ್ಸ್ ನಡುವೆ ಮಹತ್ವದ ಸಹಭಾಗಿತ್ವವಿದೆ. ಇದನ್ನು ಮುಂದಿನ ಹಂತಕ್ಕೆ ಕೊಂಡೊಯ್ಯಲು ವ್ಯಾಪಕ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ಹೇಳಿದ್ದಾರೆ. ಇದೇ ಸಂದರ್ಭದಲ್ಲಿ ವಿದೇಶಾಂಗ ಸಚಿವರು, ಅಂತಾರಾಷ್ಟ್ರೀಯ ಇಂಧನ ಸಮಿತಿಯ ಕಾರ್ಯಕಾರಿ ನಿರ್ದೇಶಕ ಪತಿಹ್ ಬಿರೊಲೊ ಅವರನ್ನು ಭೇಟಿಯಾಗಿ, ಚರ್ಚಿಸಿದರು. ಫ್ರಾನ್ಸ್‌ನ ವಿದೇಶಾಂಗ ಸಚಿವರು ಒಳಗೊಂಡಂತೆ ಉನ್ನತ ಮಟ್ಟದ ನಾಯಕರೊಂದಿಗೆ ಸಮಾಲೋಚನೆ ನಡೆಸಲಿದ್ದಾರೆ.

**<>><><*><><<>**

ಸಿಬಿಎಸ್‌ಸಿ ಪರೀಕ್ಷೆ ಬರೆಯುತ್ತಿರುವ ವಿದ್ಯಾರ್ಥಿಗಳಿಗೆ ಪರೀಕ್ಷಾ ಭಯ, ಒತ್ತಡ ನಿಭಾಯಿಸುವ ಸಲುವಾಗಿ ಮಾನಸಿಕ, ಸಾಮಾಜಿಕ, ಆಪ್ತ ಸಮಾಲೋಚನೆಗೆ ಕೇಂದ್ರೀಯ ಪ್ರೌಢ ಶಿಕ್ಷಣ ಮಂಡಳಿ ಚಾಲನೆ ನೀಡಿದೆ. ಮೊದಲ ಹಂತದಲ್ಲಿ ಹತ್ತು ಮತ್ತು ಹನ್ನೆರಡನೇ ತರಗತಿ ವಿದ್ಯಾರ್ಥಿಗಳಿಗೆ ಆಪ್ತ ಸಮಾಲೋಚನೆ ನಡೆಸುತ್ತಿದ್ದು, ಇದು ಜೂನ್ ೧ರವರೆಗೆ ಮುಂದುವರೆಯಲಿದೆ. ಇದರ ಜೊತೆಗೆ ಮುಂಬರುವ ಪರೀಕ್ಷೆಗಳಿಗೆ ವಿದ್ಯಾರ್ಥಿಗಳನ್ನು ಸಜ್ಜುಗೊಳಿಸಲು ಹಾಗೂ ಆತ್ಮ ವಿಶ್ವಾಸ ತುಂಬಲು ಆಪ್ತ ಸಮಾಲೋಚಕರು ಸೂಕ್ತ ಸಲಹೆ ಮತ್ತು ಮಾರ್ಗದರ್ಶನ ಮಾಡಲಿದ್ದಾರೆ. ವಿದ್ಯಾರ್ಥಿಗಳು ಮಾಹಿತಿಗಾಗಿ ೧೮೦೦-೧೧-೮೦೦೪ ಕರೆ ಮಾಡಬಹುದಾಗಿದೆ ಎಂದು ಹೇಳಿದೆ.

**<>><><*><><<>**

ಪ್ರಧಾನ ಮಂತ್ರಿಗಳ ಸಕ್ರಿಯ ಆಡಳಿತ ಮತ್ತು ಸಕಾಲಿಕ ಅನುಷ್ಠಾನಕ್ಕಾಗಿ ಪ್ರಮುಖ ವೇದಿಕೆಯಾದ ಪ್ರಗತಿ, ತನ್ನ ೫೦ನೇ ಸಭೆಯನ್ನು ಯಶಸ್ವಿಯಾಗಿ ನಡೆಸುವ ಮೂಲಕ ಮಹತ್ವದ ಮೈಲಿಗಲ್ಲು ಸ್ಥಾಪಿಸಿದೆ. ೨೦೧೫ ರಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಇದನ್ನು ಪ್ರಾರಂಭಿಸಿದ ನಂತರ, ಪ್ರಗತಿಯು ಪ್ರಮುಖ ಮೂಲಸೌಕರ್ಯ ಯೋಜನೆಗಳು ಮತ್ತು ಸಾರ್ವಜನಿಕ ಕುಂದುಕೊರತೆಗಳ ನೈಜ-ಸಮಯದ ಮೇಲ್ವಿಚಾರಣೆ ಮತ್ತು ಪರಿಹಾರವನ್ನು ಸಕ್ರಿಯಗೊಳಿಸುವ ಮೂಲಕ ಆಡಳಿತವನ್ನು ಪರಿವರ್ತಿಸುತ್ತಿದೆ. ಸಹಕಾರಿ ಒಕ್ಕೂಟ ವ್ಯವಸ್ಥೆಯನ್ನು ಬಲಪಡಿಸಲು ಕೇಂದ್ರ, ರಾಜ್ಯಗಳು ಮತ್ತು ಕೇಂದ್ರ ಸಚಿವಾಲಯಗಳನ್ನು ಒಂದೇ ಡಿಜಿಟಲ್ ವೇದಿಕೆಯಡಿ ತರಲಾಗುತ್ತಿದೆ. ಕಳೆದೊಂದು ದಶಕದಲ್ಲಿ ನಿರ್ಧಾರ ಕೈಗೊಳ್ಳುವ, ಅನುಷ್ಠಾನವನ್ನು ವೇಗಗೊಳಿಸುವ, ಪ್ರಮುಖ ಮೂಲಸೌಕರ್ಯ ಯೋಜನೆಗಳಲ್ಲಿ ವಿಳಂಬಕ್ಕೆ ಕಾರಣವಾಗುವ ಸಮಸ್ಯೆಗಳನ್ನು ಪರಿಹರಿಸುವ ಮತ್ತು ಬಲವಾದ ಹೊಣೆಗಾರಿಕೆಯ ಸಂಸ್ಕೃತಿ ಹುಟ್ಟುಹಾಕಲು ಸಹಾಯ ಮಾಡುತ್ತಿದೆ.

**<>><><*><><<>**

ಆಂಧ್ರಪ್ರದೇಶದ ವಿಶಾಖ ಸಂಸ್ಕರಣಾಗಾರದಲ್ಲಿ ಹಿಂದೂಸ್ತಾನ್ ಪೆಟ್ರೋಲಿಯಂ ಕಾರ್ಪೊರೇಷನ್ ಲಿಮಿಟೆಡ್‌ನಲ್ಲಿ ಕೈಗೆತ್ತಿಕೊಂಡಿರುವ ಮೇಲ್ದರ್ಜೆ ಸೌಲಭ್ಯವನ್ನು ಯಶಸ್ವಿಯಾಗಿ ಕಾರ್ಯಾರಂಭ ಮಾಡಿದ್ದಕ್ಕಾಗಿ ಪ್ರಧಾನಿ ನರೇಂದ್ರ ಮೋದಿ ಶ್ಲಾಘಿಸಿದ್ದಾರೆ. ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವ ಹರ್ದೀಪ್ ಸಿಂಗ್ ಪುರಿ ಅವರ ಸಾಮಾಜಿಕ ಮಾಧ್ಯಮ ಪೋಸ್ಟ್‌ಅನ್ನು ಹಂಚಿಕೊಂಡಿರುವ ಪ್ರಧಾನಿ, ಈ ಅತ್ಯಾಧುನಿಕ ಸೌಲಭ್ಯವು ಸ್ವಾವಲಂಬಿ ಭಾರತದ ದೃಷ್ಟಿಕೋನಕ್ಕೆ ಅನುಗುಣವಾಗಿ ಇಂಧನ ಸ್ವಾತಂತ್ರ್ಯವನ್ನು ಹೆಚ್ಚಿಸುವ ರಾಷ್ಟ್ರದ ಪ್ರಯತ್ನಗಳಿಗೆ ವೇಗವನ್ನು ನೀಡುತ್ತದೆ. ಇಂಧನ ಸುರಕ್ಷತೆ ಮತ್ತು ಸ್ವಾವಲಂಬನೆಯತ್ತ ಭಾರತದ ಪ್ರಯಾಣದಲ್ಲಿ ಇದು ನಿರ್ಣಾಯಕ ಹೆಜ್ಜೆಯಾಗಿದೆ ಎಂದು ಅವರು ಹೇಳಿದ್ದಾರೆ.

<>><><*><><<>

ತಮಿಳುನಾಡಿನ ತಿರುಪ್ಪರಂಕುಂದ್ರಂ ಬೆಟ್ಟದ ಮೇಲೆ ದೀಪವನ್ನು ಬೆಳಗಿಸಲು ಅನುಮತಿ ನೀಡುವ ಏಕಸದಸ್ಯ ನ್ಯಾಯಾಧೀಶರ ಆದೇಶವನ್ನು ಮದ್ರಾಸ್ ಹೈಕೋರ್ಟ್‌ನ ಮಧುರೈ ವಿಭಾಗೀಯ ಪೀಠ ಇಂದು ಎತ್ತಿಹಿಡಿದಿದೆ. ಶಿಲಾಸ್ತಂಭ ದೀಪಥೂನ್ ಇರುವ ಸ್ಥಳವು ಭಗವಾನ್ ಸುಬ್ರಮಣ್ಯ ಸ್ವಾಮಿ ದೇವಸ್ಥಾನಕ್ಕೆ ಸೇರಿದೆ ಎಂದು ನ್ಯಾಯಮೂರ್ತಿಗಳಾದ ಜಿ.ಜಯಚಂದ್ರನ್ ಮತ್ತು ಕೆ.ಕೆ. ರಾಮಕೃಷ್ಣನ್ ಅವರಿದ್ದ ವಿಭಾಗೀಯ ಪೀಠ ತೀರ್ಪು ನೀಡಿದೆ. ದೀಪವನ್ನು ಬೆಳಗಿಸಬಹುದು ಮತ್ತು ಅನುಮತಿಸಲಾದ ವ್ಯಕ್ತಿಗಳ ಸಂಖ್ಯೆಯನ್ನು ನಿಗದಿಪಡಿಸಬಹುದು ಎಂದು ಭಾರತೀಯ ಪುರಾತತ್ವ ಸರ್ವೇಕ್ಷಣಾ ಇಲಾಖೆಯೊಂದಿಗೆ ಸಮಾಲೋಚಿಸಿದ ನಂತರವೇ ಇದನ್ನು ನಿಗದಿಪಡಿಸಲಾಗಿದೆ ಎಂದು ನ್ಯಾಯಪೀಠ ಹೇಳಿದೆ. ಮದ್ರಾಸ್ ಹೈಕೋರ್ಟ್‌ನ ಮಧುರೈ ಪೀಠವು ಬೆಟ್ಟದ ತುದಿಯಲ್ಲಿರುವ ದೇವಾಲಯದಲ್ಲಿ ದೀಪವನ್ನು ಬೆಳಗಿಸಬೇಕೆಂದು ಈ ಹಿಂದೆ ನಿರ್ದೇಶಿಸಿತ್ತು. ಬಲಪಂಥೀಯ ಹೋರಾಟಗಾರರೊಬ್ಬರು ಸಲ್ಲಿಸಿದ ಅರ್ಜಿಯ ಮೇರೆಗೆ, ನ್ಯಾಯಮೂರ್ತಿ ಜಿ.ಆರ್.ಸ್ವಾಮಿನಾಥನ್ ಅವರು, ಬೆಟ್ಟದ ಮೇಲೆ ಪವಿತ್ರ ದೀಪವನ್ನು ಬೆಳಗಿಸುವುದನ್ನು ಖಚಿತಪಡಿಸಿಕೊಳ್ಳುವಂತೆ ರಾಜ್ಯ ಅಧಿಕಾರಿಗಳಿಗೆ ಸೂಚಿಸಿದ್ದರು. ಇನ್ನೊಂದೆಡೆ, ಕಳೆದ ತಿಂಗಳು ನಡೆದ ಸಂಸತ್ತಿನ ಚಳಿಗಾಲದ ಅಧಿವೇಶನದಲ್ಲಿ, ಮದ್ರಾಸ್ ಹೈಕೋರ್ಟ್ ನ್ಯಾಯಾಧೀಶ ನ್ಯಾಯಮೂರ್ತಿ ಸ್ವಾಮಿನಾಥನ್ ವಿರುದ್ಧದ ಮಹಾಭಿಯೋಗ ಗೊತ್ತುವಳಿ ಬಗ್ಗೆ ಡಿಎಂಕೆ ಸೇರಿದಂತೆ ವಿರೋಧ ಪಕ್ಷದ ಸಂಸದರು ಲೋಕಸಭಾಧ್ಯಕ್ಷ ಓಂ ಬಿರ್ಲಾ ಅವರಿಗೆ ಮನವಿ ಸಲ್ಲಿಸಿದ್ದರು.

<>><><*><><<>

ಕಳೆದ ತಿಂಗಳು ೩೦ ರಂದು ಚುನಾವಣಾ ವೀಕ್ಷಕ ಸಿ.ಮುರುಗನ್ ಅವರ ಮೇಲೆ ನಡೆದ ದಾಳಿಯ ಕುರಿತು ಇಂದು ಸಂಜೆ ೫ ಗಂಟೆಯೊಳಗೆ ವಿವರವಾದ ಕ್ರಮ ಕೈಗೊಂಡ ವರದಿ ಸಲ್ಲಿಸುವಂತೆ ಕೇಂದ್ರ ಚುನಾವಣಾ ಆಯೋಗ ಪಶ್ಚಿಮ ಬಂಗಾಳದ ಪೊಲೀಸ್ ಮಹಾನಿರ್ದೇಶಕ ರಾಜೀವ್ ಕುಮಾರ್ ಅವರಿಗೆ ನಿರ್ದೇಶನ ನೀಡಿದೆ. ದಕ್ಷಿಣ ೨೪ ಪರಗಣ ಜಿಲ್ಲೆಯ ಮತದಾರರ ಪಟ್ಟಿ ವೀಕ್ಷಕರಾಗಿ ಸೇವೆ ಸಲ್ಲಿಸುತ್ತಿದ್ದ ಮುರುಗನ್ ಅವರು ಮತದಾರರ ಪಟ್ಟಿಗಳ ವಿಶೇಷ ತೀವ್ರ ಪರಿಷ್ಕರಣೆಯನ್ನು ಮೇಲ್ವಿಚಾರಣೆ ಮಾಡುತ್ತಿದ್ದಾಗ ಈ ಘಟನೆ ಸಂಭವಿಸಿದೆ. ಭೇಟಿಯ ಸಮಯದಲ್ಲಿ, ಅವರ ವಾಹನವು ಹಾನಿಗೊಳಗಾಯಿತು ಮತ್ತು ಅವರು ಮಗ್ರಹತ್‌ನಲ್ಲಿ ಪ್ರತಿಭಟನೆ ಮತ್ತು ಅಡಚಣೆ ಎದುರಿಸಿದರು. ವೀಕ್ಷಕರ ಭೇಟಿಯ ಬಗ್ಗೆ ಸ್ಥಳೀಯ ಅಧಿಕಾರಿಗಳಿಗೆ ಮುಂಚಿತವಾಗಿ ತಿಳಿಸಿದ್ದರೂ ಪೊಲೀಸರು ಸಾಕಷ್ಟು ಭದ್ರತಾ ವ್ಯವಸ್ಥೆಗಳನ್ನು ಒದಗಿಸುವಲ್ಲಿ ಗಂಭೀರ ಲೋಪಗಳನ್ನು ಎತ್ತಿ ತೋರಿಸಿದ ಮುರುಗನ್ ಅವರ ವರದಿಯನ್ನು ಪರಿಶೀಲಿಸಿದ ನಂತರ ಚುನಾವಣಾ ಆಯೋಗದ ನಿರ್ದೇಶನವು ಬಂದಿದೆ.

<>><><*><><<>

ಬರುವ ಫೆಬ್ರವರಿ ೧೫ ರಿಂದ ೧೭ ರವರೆಗೆ ದುಬೈ ವಿಶ್ವ ವ್ಯಾಪಾರ ಕೇಂದ್ರದಲ್ಲಿ ಮೂರನೇ ಅಂತಾರಾಷ್ಟ್ರೀಯ ಆಯುಷ್ ಸಮ್ಮೇಳನ ಮತ್ತು ಪ್ರದರ್ಶನವನ್ನು ಆಯೋಜಿಸಲಾಗಿದೆ. ಈ ಸಮ್ಮೇಳನವು ೩೫ ಕ್ಕೂ ಹೆಚ್ಚು ದೇಶಗಳ ವೈದ್ಯರು, ಸಂಶೋಧಕರು, ನೀತಿ ನಿರೂಪಕರು, ಉದ್ಯಮ ಪ್ರತಿನಿಧಿಗಳು ಮತ್ತು ಸಾಂಪ್ರದಾಯಿಕ ವೈದ್ಯಕೀಯ ಪದ್ಧತಿಗಳ ವಿದ್ಯಾರ್ಥಿಗಳನ್ನು ಒಟ್ಟುಗೂಡಿಸಲಿದೆ. ಈ ಕಾರ್ಯಕ್ರಮವನ್ನು ವಿಶ್ವ ಆಯುರ್ವೇದ ಪ್ರತಿಷ್ಠಾನದ ಸಹಯೋಗದೊಂದಿಗೆ ಸೈನ್ಸ್ ಇಂಡಿಯಾ ಫೋರಂ, ಭಾರತದ ಆಯುಷ್ ಸಚಿವಾಲಯ ಮತ್ತು ದುಬೈನಲ್ಲಿರುವ ಭಾರತದ ಕಾನ್ಸುಲೇಟ್ ಜನರಲ್ ಅವರ ಆಶ್ರಯದಲ್ಲಿ, ಗ್ಲೋಬಲ್ ಹೋಮಿಯೋಪತಿ ಫೌಂಡೇಶನ್, ಎಮಿರೇಟ್ಸ್ ಆಯುರ್ವೇದ ಪದವೀಧರರ ಸಂಘ ಮತ್ತು ಅಮೇರಿಕ, ಆಸ್ಟ್ರೇಲಿಯಾ, ದೂರದ ಪೂರ್ವ, ಪಶ್ಚಿಮ ಏಷ್ಯಾ ಮತ್ತು ಆಫ್ರಿಕಾದ ಇತರ ಆಯುಷ್ ಸಂಸ್ಥೆಗಳ ಬೆಂಬಲದೊಂದಿಗೆ ಏರ್ಪಡಿಸಲಾಗಿದೆ.

<>><><*><><<>

ಇರಾನ್‌ನಲ್ಲಿ ಮೂರು ವರ್ಷಗಳಲ್ಲಿಯೇ ಅತ್ಯಂತ ಗಂಭೀರವಾದ ಅಶಾಂತಿಯ ಅಲೆ ಎದ್ದಿದೆ. ದೇಶಾದ್ಯಂತ ನಡೆಯುತ್ತಿರುವ ಪ್ರತಿಭಟನೆಗಳು ಇಂದು ಹತ್ತನೇ ದಿನಕ್ಕೆ ಕಾಲಿಟ್ಟಿದೆ. ಹಿಂಸಾಚಾರ ಹೆಚ್ಚಾದರೆ ಪ್ರತಿಭಟನಾಕಾರರ

ಪರವಾಗಿ ನಿಲ್ಲಬಹುದು ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಎಚ್ಚರಿಕೆ ನೀಡಿದ್ದರೂ ಲೆಕ್ಕಿಸದೇ ಪ್ರಮುಖ ನಗರಗಳಲ್ಲಿ ಭದ್ರತಾ ಪಡೆಗಳು ಪಹರೆ ಬಿಗಿಗೊಳಿಸಿವೆ.

**<>><><*><><<>**

ಕೇಂದ್ರದ ಮಾಜಿ ಸಚಿವ ಸುರೇಶ್ ಕಲ್ಮಾಡಿ ದೀರ್ಘಕಾಲದ ಅನಾರೋಗ್ಯದಿಂದ ಇಂದು ಪುಣೆಯಲ್ಲಿ ನಿಧನರಾಗಿದ್ದಾರೆ. ಅವರಿಗೆ ೮೧ ವರ್ಷ ವಯಸ್ಸಾಗಿತ್ತು. ಅವರು ಭಾರತೀಯ ಒಲಿಂಪಿಕ್ ಅಸೋಸಿಯೇಷನ್‌ನ ಅಧ್ಯಕ್ಷರಾಗಿಯೂ ಸೇವೆ ಸಲ್ಲಿಸಿದ್ದರು. ಅವರು ತಮ್ಮ ಸುದೀರ್ಘ ರಾಜಕೀಯ ಜೀವನದಲ್ಲಿ ಹಲವಾರು ಪ್ರಮುಖ ಹುದ್ದೆಗಳನ್ನು ಅಲಂಕರಿಸಿದ್ದರು.

**<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>**

**<>><><ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೨.೩೦ ಕ್ಕೆ><><<>**